ಶ್ರೀ ಎ. ಕೃಷ್ಣಪ್ಪ (ಪಶುಸಂಗೋಪನಾ ಮತ್ತು ಸಕ್ಕರೆ ಸಚಿವರು)

ಅ) ಚಳ್ಳಕೆರೆ
ಉಳ್ಳವರ್ತಿ } 3-8-1996.

ಧನಗೂರು 26-7-98
ಗುತ್ತಲ 1-1-84

ಆ) ಯೋಜನೇತರ ಅಡಿಯಲ್ಲಿ ಏನನ್ನೂ ಬಿಡುಗಡೆ ಮಾಡಿರುವುದಿಲ್ಲ.

ಇ) ಯೋಜನೇತರದಡಿಯಲ್ಲಿ ಮಂಡಳಿಗೆ ಒದಗಿಸಲಾದ ಅನುದಾನವನ್ನು ಈಗಾಗಲೇ ಬಿಡುಗಡೆಗೊಳಿಸಲಾಗಿದೆ.

ಈ) 1998-99 ರೂ. 300.00 ಲಕ್ಷಗಳು
1999-2000 ರೂ. 70.00 ಲಕ್ಷಗಳು

ಆರ್ಥಿಕ ಇಲಾಖೆಯ ಅನುದಾನವನ್ನು ಕಡಿತಗೊಳಿಸಿದೆ.

ಚೆನ್ನಗಿರಿ ತಾಲ್ಲೂಕಿನ ಮಿನಿ ವಿಧಾನ ಸೌಧ ಕುರಿತು

1344 (1839) ಶ್ರೀ ವಡ್ನಾಳ್ ರಾಜಣ್ಣ (ಚೆನ್ನಗಿರಿ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಚೆನ್ನಗಿರಿ ತಾಲ್ಲೂಕು ಮಿನಿ ವಿಧಾನಸೌಧ ಕಟ್ಟಡವನ್ನು ಎಂದು ಪೂರ್ಣಗೊಳಿಸ ಲಾಗುವುದು?

ಆ) ಅದರ ಅಂದಾಜು ವೆಚ್ಚ ಎಷ್ಟು ?

ಇ) ಈವರೆಗೆ ಎಷ್ಟು ಹಣ ಖರ್ಚು ಮಾಡಲಾಗಿದೆ.

ಶ್ರೀ ಧರ್ಮ ಸಿಂಗ್ (ಲೋಕೋಪಯೋಗಿ ಸಚಿವರು) :

ಅ) ಅನುದಾನದ ಲಭ್ಯತೆಯನ್ನು ಗಮನದಲ್ಲಿಟ್ಟುಕೊಂಡು 2001 ನೇ ಸಾಲಿನಲ್ಲಿ ಪೂರ್ಣಗೊಳಿಸಲಾಗುವುದು.

ಆ) ರೂ. 45.00 ಲಕ್ಷಗಳು

ಇ) ಈವರೆವಿಗೆ ರೂ. 46.90 ಲಕ್ಷಗಳು ಖರ್ಚಾಗಿರುತ್ತದೆ.

ರಾಜ್ಯದ ತಾಲ್ಲೂಕು ಕೇಂದ್ರಗಳಲ್ಲಿನ ಸ್ಟೇಡಿಯಂ ನಿರ್ಮಾಣ

1347 (1851) ಶ್ರೀ ಎಸ್. ಯೋಗೀಶ್ ಭಟ್ (ಮಂಗಳೂರು) : ಮಾನ್ಯ ಯುವಜನ ಸೇವೆ ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದ ತಾಲ್ಲೂಕು ಕೇಂದ್ರಗಳಲ್ಲಿನ ಸ್ಟೇಡಿಯಂ ನಿರ್ಮಾಣ ಕಾರ್ಯ ಯಾವ ಹಂತದಲ್ಲಿದೆ?